351
23/7/2015

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2015-16ನೇ ಸಾಲಿಗೆ ಬಸವಕಲ್ಯಾಣ ತಾಲ್ಲೂಕಿನ ಬಸವಕಲ್ಯಾಣ ಎಜುಕೇಷನ್ ಟ್ರಸ್ಟ್‌ನ ವತಿಯಿಂದ ಬಸವಕಲ್ಯಾಣ ಪಾಲಿಟೆಕ್ನಿಕ್-ಎಂಬ ಖಾಸಗಿ ಪಾಲಿಟೆಕ್ನಿಕ್‌ನ್ನು ಪ್ರಾರಂಭಿಸಲು ಸರ್ಕಾರದ ಅನುಮತಿ ನೀಡುವ ಬಗ್ಗೆ-

------

**ಓದಲಾಗಿದೆ:-**

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಡಿಟಿಇ 04 ಡಿವಿಪಿ (2) 2015, ದಿ:27-05-2015.

**ಪ್ರಸ್ತಾವನೆ:-**

ಮೇಲೆ ಓದಲಾದ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪ್ರಸ್ತಾವನೆಯಲ್ಲಿ ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನ ಬಸವಕಲ್ಯಾಣ ಎಜುಕೇಷನ್ ಟ್ರಸ್ಟ್‌ನ ವತಿಯಿಂದ 2015-16ನೇ ಶೈಕ್ಷಣಿಕ ಸಾಲಿನಿಂದ "ಬಸವ ಕಲ್ಯಾಣ ಪಾಲಿಟೆಕ್ನಿಕ್" ಎಂಬ ಖಾಸಗಿ ಪಾಲಿಟೆಕ್ನಿಕ್‌ನ್ನು ಪ್ರಾರಂಭಿಸಲು ಎಐಸಿಟಿಇ, ನವದೆಹಲಿ ಇವರು ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ಸದರಿ ಪಾಲಿಟೆಕ್ನಿಕ್‌ನ್ನು 04 ಡಿಪ್ಲೋಮೊ ಕೋರ್ಸುಗಳೊಂದಿಗೆ (ತಲಾ 60 ವಿದ್ಯಾರ್ಥಿಗಳ ಪ್ರಮಾಣದೊಂದಿಗೆ) ಪ್ರಾರಂಭಿಸಲು ಅನುಮತಿ ನೀಡಬೇಕೆಂದು ಈ ಮೇಲೆ ಹೇಳಿದ ಆಡಳಿತ ಮಂಡಳಿಯು ಕೋರಿದ್ದ ಹಿನ್ನೆಲೆಯಲ್ಲಿ, ಈ ಬಗ್ಗೆ ನಿರ್ದೇಶನಾಲಯದ ವತಿಯಿಂದ ಸ್ಥಳ ತನಿಖೆ ನಡೆಸಿ ಸದರಿ ಸ್ಥಳ ತನಿಖಾ ತಂಡವು 2015-16ನೇ ಸಾಲಿನಿಂದ ಬೀದರ್ ಜಿಲ್ಲೆಯ ಬಸವ ಕಲ್ಯಾಣ ಎಜುಕೇಷನ್ ಟ್ರಸ್ಟ್ ವತಿಯಿಂದ "ಬಸವ ಕಲ್ಯಾಣ ಪಾಲಿಟೆಕ್ನಿಕ್" ನ್ನು ಪ್ರಾರಂಭಿಸಲು ಸದರಿ ಸಂಸ್ಥೆಯು ಎಲ್ಲಾ ಮೂಲಭೂತ ಹಾಗೂ ಶೈಕ್ಷಣಿಕ ಸೌಲಭ್ಯಗಳನ್ನು ಹೊಂದಿರುವುದರಿಂದ ಸದರಿ ಪಾಲಿಟೆಕ್ನಿಕ್‌ನ್ನು ಪ್ರಾರಂಭಿಸಲು ಶಿಫಾರಸ್ಸು ಮಾಡಿದ ಹಿನ್ನೆಲೆಯಲ್ಲಿ, 2015-16ನೇ ಸಾಲಿನಿಂದ ಬಸವ ಕಲ್ಯಾಣದಲ್ಲಿ "ಬಸವ ಕಲ್ಯಾಣ ಪಾಲಿಟೆಕ್ನಿಕ್"ನ್ನು 04 ಡಿಪ್ಲೋಮೊ ಕೋರ್ಸುಗಳೊಂದಿಗೆ (ತಲಾ 60 ವಿದ್ಯಾರ್ಥಿಗಳ ಪ್ರಮಾಣದೊಂದಿಗೆ) ಪ್ರಾರಂಭಿಸಲು ಸರ್ಕಾರದ ಅನುಮತಿ ನೀಡಬೇಕೆಂದು ತಾಂತ್ರಿಕ ಶಿಕ್ಷಣ ನಿರ್ದೇಶಕರು ಕೋರಿರುತ್ತಾರೆ.

DVP(2) 23/7/15

ಈ ಹಿನ್ನೆಲೆಯಲ್ಲಿ, ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 154 ಟಿಪಿಇ 2015.**

**ಬೆಂಗಳೂರು, ದಿನಾಂಕ:25ನೇ ಜೂನ್ 2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬಸವಕಲ್ಯಾಣ ತಾಲ್ಲೂಕಿನ ಬಸವಕಲ್ಯಾಣ ಎಜುಕೇಷನ್ ಟ್ರಸ್ಟ್, ಎನ್.ಹೆಚ್.9, ಬಸವಕಲ್ಯಾಣ, ಬೀದರ್ ಜಿಲ್ಲೆ ಈ ಸಂಸ್ಥೆಯ ವತಿಯಿಂದ

**"ಬಸವಕಲ್ಯಾಣ ಪಾಲಿಟೆಕ್ನಿಕ್"** ಎಂಬ ಖಾಸಗಿ ಪಾಲಿಟೆಕ್ನಿಕ್‌ನ್ನು 2015-16ನೇ ಶೈಕ್ಷಣಿಕ ಸಾಲಿನಿಂದ ಈ ಕೆಳಕಂಡ ಹೆಸರು, ವಿಳಾಸ, ಕೋರ್ಸು ಮತ್ತು ವಿದ್ಯಾರ್ಥಿಗಳ ಪ್ರಮಾಣದೊಂದಿಗೆ ಪ್ರಾರಂಭಿಸಲು ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

| **ಪಾಲಿಟೆಕ್ನಿಕ್ನ ಹೆಸರು ಮತ್ತು ವಿಳಾಸ** | **ಕೋರ್ಸುಗಳ ವಿವರ** | **ಪ್ರವೇಶ ಸಂಖ್ಯೆ** |
|---|---|---|
| ಬಸವಕಲ್ಯಾಣ ಪಾಲಿಟೆಕ್ನಿಕ್, | 1. ಸಿವಿಲ್ ಇಂಜಿನಿಯರಿಂಗ್ | 60 |
| ಎನ್‌ಹೆಚ್-9, | 2. ಮೆಕ್ಯಾನಿಕಲ್ ಇಂಜಿನಿಯರಿಂಗ್ | 60 |
| ಬಸವಕಲ್ಯಾಣ-585327 | 3. ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಷನ್ ಇಂಜಿ. | 60 |
| ಬೀದರ್ ಜಿಲ್ಲೆ. | 4. ಕಂಪ್ಯೂಟರ್ ಸೈನ್ಸ್ & ಇಂಜಿನಿಯರಿಂಗ್ | 60 |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ನಾಗಭೂಷಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

ಗೆ:

1. ತಾಂತ್ರಿಕ ಶಿಕ್ಷಣ ನಿರ್ದೇಶಕರು, ಬೆಂಗಳೂರು
2. ಅಧ್ಯಕ್ಷರು / ಕಾರ್ಯದರ್ಶಿಗಳು, ಬಸವಕಲ್ಯಾಣ ಎಜುಕೇಷನಲ್ ಟ್ರಸ್ಟ್, ಎನ್‌ಹೆಚ್-9, ಬಸವಕಲ್ಯಾಣ-585327, ಬೀದರ್ ಜಿಲ್ಲೆ (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ)
3. ಪ್ರಾಂಶುಪಾಲರು, ಬಸವಕಲ್ಯಾಣ ಪಾಲಿಟೆಕ್ನಿಕ್, ಎನ್‌ಹೆಚ್-9, ಬಸವಕಲ್ಯಾಣ-585327, ಬೀದರ್ ಜಿಲ್ಲೆ (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ)
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ (ಉನ್ನತ ಶಿಕ್ಷಣ) ಶಿಕ್ಷಣ ಇಲಾಖೆ ಅವರ ಆಪ್ತ ಕಾರ್ಯದರ್ಶಿಗಳು
5. ಸರ್ಕಾರದ ಉಪ ಕಾರ್ಯದರ್ಶಿ, ತಾಂತ್ರಿಕ ಮತ್ತು ಕಾಲೇಜು ಶಿಕ್ಷಣ ಇಲಾಖೆ
6. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು

ಹಿಂಬರಹ ಸಂಖ್ಯೆ: ಡಿಟಿಇ 04 ಡಿವಿಪಿ(2) 2015                                                  ದಿನಾಂಕ: 23/07/2015.

ಸರ್ಕಾರದ ಆದೇಶದ ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಸಂಬಂಧಪಟ್ಟ ಈ ಕೆಳಕಂಡ ಅಧಿಕಾರಿಗಳಿಗೆ ಹಾಗೂ ವಿಭಾಗಗಳಿಗೆ ಕಳುಹಿಸಲಾಗಿದೆ.

01. ಅಧ್ಯಕ್ಷರು / ಕಾರ್ಯದರ್ಶಿಗಳು, ಬಸವಕಲ್ಯಾಣ ಎಜುಕೇಷನಲ್ ಟ್ರಸ್ಟ್, ಎನ್‌ಹೆಚ್-9, ಬಸವಕಲ್ಯಾಣ-585327, ಬೀದರ್ ಜಿಲ್ಲೆ.
02. ಪ್ರಿನ್ಸಿಪಾಲರು, ಬಸವಕಲ್ಯಾಣ ಪಾಲಿಟೆಕ್ನಿಕ್, ಎನ್‌ಹೆಚ್-9, ಬಸವಕಲ್ಯಾಣ-585327, ಬೀದರ್ ಜಿಲ್ಲೆ.
03. ಜಂಟಿ ನಿರ್ದೇಶಕರು (ಆಡಳಿತ/ಪರೀಕ್ಷೆ/ತನಿಖೆ/ಎಟಿಎಸ್)
04. ಉಪ ನಿರ್ದೇಶಕರು (ಯೋಜನೆ/ಪರೀಕ್ಷೆ/ತನಿಖೆ)
05. ಸಹಾಯಕ ನಿರ್ದೇಶಕರು (ಯೋಜನೆ/ಪರೀಕ್ಷೆ/ತನಿಖೆ/ಎಂಪಿಸಿ)
06. ಸಂಖ್ಯಾಧಿಕಾರಿಗಳಿಗೆ
07. ಆಡಳಿತಾಧಿಕಾರಿಗಳಿಗೆ
08. ರಿಜಿಸ್ಟ್ರಾರ್ (ಪರೀಕ್ಷೆ/ಎಸಿಎಂ)
09. ಅಧೀಕ್ಷಕರು, ಎಸಿಎಂ ವಿಭಾಗ
10. ಕಾರ್ಯನಿರ್ವಾಹಕರು, ಎಸಿಎಂ(2) ವಿಭಾಗ
11. ಸರ್ಕಾರಿ ಆದೇಶಗಳ ಕಡತಕ್ಕೆ
12. ಈ ಗೌರ್‌ನೆನ್ಸ್ ಸೆಲ್‌ಗೆ
13. ತಾಂತ್ರಿಕ ವಿಭಾಗದ ಡಿಲ್‌ಹಿಎಂ / ಇಎಪಿ / ಇಎಟಿಎಪಿ ವಿಭಾಗಗಳಿಗೆ.

(ಸಹಿ)
ಜಂಟಿ ನಿರ್ದೇಶಕರು (ಎಟಿಎಸ್)

23/7/2015